ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 358
2. ಸದಸ್ಯರ ಹೆಸರು : ಶ್ರೀ ಕೆ. ಗೋವಿಂದರಾಜ್ (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 10-12-2020
4. ಉತ್ತರಿಸುವವರು : ಮುಖ್ಯಮಂತ್ರಿಗಳು

ಕ್ರ.ಸಂ	ಪ್ರಶ್ನೆ	ಉತ್ತರ
ಅ	ಬೆಂಗಳೂರು ನಗರದ ಯಶವಂತಪುರ ರೈಲ್ವೆ ನಿಲ್ದಾಣಕ್ಕೆ ಬರುವ ಮತ್ತು ಇಲ್ಲಿಂದ ಪ್ರಯಾಣಿಸುವ ಪ್ರಯಾಣಿಕರ ಅಂದಾಜು ಸರ್ಕಾರಕ್ಕಿದೆಯೇ; (ವಿವರ ಒದಗಿಸುವುದು)	ರೈಲ್ವೆ ಇಲಾಖೆಯ ಮಾಹಿತಿಯನ್ವಯ ಪ್ರತಿನಿತ್ಯ ಸುಮಾರು ಒಂದು ಲಕ್ಷ ಪ್ರಯಾಣಿಕರು / ಸಂದರ್ಶಕರು ಬೆಂಗಳೂರು ನಗರದ ಯಶವಂತಪುರ ರೈಲ್ವೆ ನಿಲ್ದಾಣದಿಂದ ಬರುವ ಮತ್ತು ಇಲ್ಲಿಂದ ಪ್ರಯಾಣಿಸುವ ಅಂದಾಜು ಸರ್ಕಾರಕ್ಕೆ ಇರುತ್ತದೆ.
ಆ	ಯಶವಂತಪುರ ರೈಲ್ವೆ ನಿಲ್ದಾಣ ತಲುಪಲು ಮತ್ತು ನಿಲ್ದಾಣದಿಂದ ನಗರದ ಇತರೆಡೆಗೆ ಸಾಗಲು ಇರುವ ಮಾರ್ಗಗಳು ಕಿರಿದಾಗಿದ್ದು, ಬೀದಿ ಬೀದಿ ವ್ಯಾಪಾರಿಗಳು, ಅಂಗಡಿಗಳು, ರಸ್ತೆಯನ್ನು ಆಕ್ರಮಿಸಿಕೊಂಡಿರುವ ಅಂಶವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ದೆಯೇ; ಹಾಗಿದ್ದಲ್ಲಿ, ಸುಗಮ ವಾಹನ ಸಂಚಾರಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳು ಯಾವುವು;	ಯಶವಂತಪುರ ರೈಲ್ವೆ ನಿಲ್ದಾಣ ತಲುಪಲು ಮತ್ತು ನಿಲ್ದಾಣದಿಂದ ನಗರದ ಇತರೆಡೆಗೆ ಸಾಗಲು 1) ತುಮಕೂರು ಮುಖ್ಯರಸ್ತೆ ಮತ್ತು 2) ಯಶವಂತಪುರ ಮಾರುಕಟ್ಟೆ ರಸ್ತೆ ಎಂಬ ಎರಡು ರಸ್ತೆಗಳಿರುತ್ತವೆ. ಯಶವಂತಪುರ ಮಾರುಕಟ್ಟೆ ರಸ್ತೆಯಲ್ಲಿ ಬೀದಿ ಬದಿ ವ್ಯಾಪಾರಿಗಳು, ಅಂಗಡಿಗಳು, ರಸ್ತೆಯನ್ನು ಆಕ್ರಮಿಸಿಕೊಂಡಿರುವ ಅಂಶವನ್ನು ಪಾಲಿಕೆಯು ಪರಿಗಣಿಸಿ, ಆಗಿಂದ್ದಾಗೆ ಪಶ್ಚಿಮ ವಲಯ ವತಿಯಿಂದ ತಾತ್ಕಾಲಿಕ ಒತ್ತುವರಿಗಳನ್ನು ತೆರೆವುಗೊಳಿಸಿ ಪ್ರಯಾಣಿಕರ ಸಂಚಾರಕ್ಕೆ ಅನುವು ಮಾಡಿಕೊಡಲಾಗುತ್ತಿರುತ್ತದೆ. ಇದಲ್ಲದೆ ತುಮಕೂರು ಮುಖ್ಯರಸ್ತೆಯಲ್ಲಿ ಪ್ರಯಾಣಿಕರು ಮತ್ತು ಪಾದಚಾರಿಗಳು ಸುಗಮವಾಗಿ ರಸ್ತೆ ದಾಟಲು ಅನುಕೂಲವಾಗುವಂತೆ ಲಿಫ್ಟ್ ಒಳಗೊಂಡ ಪಾದಚಾರಿ ಮೇಲ್ಸೇತುವೆಯನ್ನು ಪಾಲಿಕೆ ವತಿಯಿಂದ ನಿರ್ಮಿಸಲಾಗಿದೆ.
ಇ	ಯಶವಂತಪುರ ರೈಲ್ವೆ ನಿಲ್ದಾಣವನ್ನು ಮೇಲ್ದರ್ಜೆಗೇರಿಸಲು ಮತ್ತು ರಸ್ತೆಗಳ ಅಭಿವೃದ್ಧಿಗಾಗಿ ಈಗಾಗಲೇ ಕೇಂದ್ರ ಸರ್ಕಾರ ಅನುದಾನ ಒದಗಿಸಿರುವುದು ನಿಜವೇ; ಹಾಗಿದ್ದಲ್ಲಿ, ಈ ಅಭಿವೃದ್ಧಿ ಕುರಿತು ಆಗಿರುವ ಪ್ರಗತಿ ಏನು (ವಿವರ ಒದಗಿಸುವುದು)	ಕೇಂದ್ರ ಸರ್ಕಾರದಿಂದ ಯಶವಂತಪುರ ರೈಲ್ವೆ ನಿಲ್ದಾಣಕ್ಕೆ ಸಂಪರ್ಕಿಸುವ ರಸ್ತೆಗಳ ಅಭಿವೃದ್ಧಿಗೆ ನಿರ್ಧಿಷ್ಟವಾಗಿ ಯಾವುದೇ ಅನುದಾನ ಒದಗಿಸಿರುವುದಿಲ್ಲ.

ಈ	ಯಶವಂತಪುರ ರೈಲ್ವೆ ನಿಲ್ದಾಣ ತಲುಪಲು ಇರುವ ನ್ಯೂನ್ಯತೆ ಸರಿಪಡಿಸುವ ನಿಟ್ಟಿನಲ್ಲಿ ಸರ್ಕಾರ ವಿಶೇಷ ಯೋಜನೆ ರೂಪಿಸಿದೆಯೇ; ಹಾಗಿದ್ದಲ್ಲಿ, ವಿವರ ಒದಗಿಸುವುದು?	ಕರ್ನಾಟಕ ಸರ್ಕಾರದ ಅನುದಾನದಲ್ಲಿ ತುಮಕೂರು ಮುಖ್ಯ ರಸ್ತೆಯನ್ನು ವೈಟ್ ಟಾಪಿಂಗ್ ರಸ್ತೆಯಾಗಿ ಅಭಿವೃದ್ಧಿಪಡಿಸಲು ಅನುಮೋದನೆಯಾಗಿದ್ದು, ಕಾಮಗಾರಿಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಪ್ರಸ್ತುತ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.

ಸಂಖ್ಯೆ: ನಅಇ 248 ಎಂಎನ್‌ವೈ 2020

(ಬಿ.ಎಸ್. ಯಡಿಯೂರಪ್ಪ)
ಮುಖ್ಯಮಂತ್ರಿ